ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಿರ್ಮಿಸುವ ಮನೆಗಳ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

309 (465) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ನಿರ್ಮಿತವಾಗುವ ಮನೆಗಳು ನಿಗದಿತ ಅವಧಿಯೊಳಗೆ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ವಿಳಂಬವಾಗಲು ಕಾರಣಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಎಷ್ಟು ಮನೆಗಳು ಮಂಜೂರಾಗಿವೆ ; ಎಷ್ಟು ಮನೆಗಳು ಪೂರ್ಣಗೊಂಡಿವೆ ; ಎಷ್ಟು ಪೂರ್ಣಗೊಳ್ಳಲು ಬಾಕಿ ಇವೆ ; ಬಾಕಿ ಇರಲು ಕಾರಣವೇನು ;

(ಈ) ಕಳೆದ ಎರಡು ವರ್ಷಗಳಲ್ಲಿ ಈ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗೂ ನಗರಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಉ) ಇದುವರೆಗೂ ಬಳಕೆಯಾದ ಅನುದಾನವೆಷ್ಟು ಹಾಗೂ ಉಳಿಕೆ ಹಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)